ಬಸವಕಲ್ಯಾಣ ತಾಲ್ಲೂಕಿನ ಮಂಠಾಳ ಹಾಗೂ ರಾಜೇಶ್ವರಗಳಲ್ಲಿ ಉರ್ದು ಮಾಧ್ಯಮದ ಪ್ರೌಢಶಾಲೆಗಳನ್ನು ತೆರೆಯುವುದು

2581(2955) ಶ್ರೀ ಎಂ.ಜಿ ಮುಳೆ *(ಬಸವಕಲ್ಯಾಣ)* :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಬಸವಕಲ್ಯಾಣ ಮತಕ್ಷೇತ್ರದ ವ್ಯಾಪ್ತಿಗೆ ಬರುವ ಮಂಠಾಳ ಹಾಗೂ ರಾಜೇಶ್ವರ ಗ್ರಾಮಗಳಲ್ಲಿ ಉರ್ದು ಪ್ರಾಥಮಿಕ ಶಾಲೆಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) 1ರಿಂದ 7ನೇ ತರಗತಿಯವರೆಗೆ ಪ್ರಾಥಮಿಕ ಶಾಲೆ ಇದ್ದು ಪ್ರೌಢಶಾಲೆ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಮಂಠಾಳ ಗ್ರಾಮದಲ್ಲಿ ಉರ್ದು ಪ್ರೌಢಶಾಲೆ ಸ್ಥಾಪಿಸಲು ಕೈಗೊಂಡಿರುವ ಕ್ರಮವೇನು; ಹಾಗೂ ಎಂದಿನಿಂದ ಪ್ರಾರಂಭಿಸಲಾಗುವುದು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

ಅ) ಹೌದು

ಆ) ಹೌದು

ಇ) ಸರ್ಕಾರದ ಆದೇಶ ಸಂಖ್ಯೆ ಇಡಿ 67 ಎಸ್‌ಇಎಸ್ 2001 ರ ದಿನಾಂಕ 10-7-2001ರಲ್ಲಿ ಈಗಾಗಲೇ ಹೊಸದಾಗಿ ಸರ್ಕಾರಿ ಪ್ರೌಢಶಾಲೆ ಪ್ರಾರಂಭಿಸಲು ಅನುಮತಿ ನೀಡಲಾಗಿದೆ.

ಹುಣಸೂರು ತಾಲ್ಲೂಕಿನ *ಸರ್ಕಾರಿ* ಆಸ್ಪತ್ರೆಯಲ್ಲಿ *ಸಿಬ್ಬಂದಿ* ಕೊರತೆ

2582(3358) ಶ್ರೀ ಪಾಪಣ್ಣ ವಿ. (ಹುಣಸೂರು) :— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಹುಣಸೂರು ತಾಲ್ಲೂಕಿನಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಒಟ್ಟು 72 ವಿವಿಧ ದರ್ಜೆ ಹುದ್ದೆಗಳು ಖಾಲಿ ಇರುವುದು ಸರ್ಕಾರಕ್ಕೆ ತಿಳಿದಿದೆಯೇ?

ಆ) ಹಾಗಿದಲ್ಲಿ ಈ ಹುದ್ದೆಗಳನ್ನು ತುಂಬಲು ಏನು ಕ್ರಮ ತೆಗೆದುಕೊಂಡಿದೆ; ಖಾಲಿ ಇರುವ ಹುದ್ದೆಯಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ನಿಜವಲ್ಲವೆ?

F-26-51

ಡಾ: ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

ಅ) ತಿಳಿದಿದೆ.

ಆ) 8 ಹುದ್ದೆಗಳು ಲಿಪಿಕ ವರ್ಗಕ್ಕೆ ಸೇರಿರುವುದಿಂದ ಈ ಹುದ್ದೆಗಳು ಅತ್ಯಗತ್ಯ ಸೇವೆಯಲ್ಲಿ ಬರುವುದಿಲ್ಲ. ಇನ್ನು ಉಳಿದ 64 ಹುದ್ದೆಗಳಲ್ಲಿ 18 ಫಾರ್ಮಾಸಿಸ್ಟ್ 15 ಕಿರಿಯ ಪುರುಷ ಆರೋಗ್ಯ ಸಹಾಯಕರು ಒಟ್ಟು 18 ಹುದ್ದೆಗಳನ್ನು ಭರ್ತಿ ಮಾಡಲು ವಿಶೇಷ ನೇರ ನೇಮಕಾತಿ ನಿಯಮವನ್ನು ರೂಪಿಸಲು ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. ಪ್ರಯೋಗ ಶಾಲೆ ತಂತ್ರಜ್ಞರನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲು ಜಿಲ್ಲಾಧಿಕಾರಿಯವರಿಗೆ ಅನುಮತಿ ನೀಡಲಾಗಿದೆ. ಉಳಿದ ಹುದ್ದೆಗಳನ್ನು ಪದೋನ್ನತಿ ಮೂಲಕ ಭರ್ತಿ ಮಾಡಲಾಗುವುದು.

ಹುಣಸೂರು ಶ್ರೀ ಡಿ. ದೇವರಾಜ ಅರಸ್ ಪ್ರಥಮ ದರ್ಜೆ ಕಾಲೇಜಿಗೆ ಹಣ ಬಿಡುಗಡೆ

2583(3359) ಶ್ರೀ ವಿ. ಪಾಪಣ್ಣ (ಹುಣಸೂರು) :— ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಹುಣಸೂರು ಟೌನ್ ಶ್ರೀ ದೇವರಾಜ್ ಅರಸ್ ಸರ್ಕಾರಿ ಕಾಲೇಜಿಗೆ ಕಟ್ಟಡ ನಿರ್ಮಾಣಕ್ಕೆ 1991ರಲ್ಲಿ 62 ಲಕ್ಷ ರೂ.ಗಳಿಗೆ ಮಂಜೂರಾತಿ ದೊರಕಿದ್ದು, ಈವರೆಗೆ 35 ಲಕ್ಷ ಮಾತ್ರ ಬಿಡುಗಡೆಯಾಗಿದ್ದು, ಈ ಕಟ್ಟಡವನ್ನು ಪೂರ್ಣಗೊಳಿಸಲು ಕಳೆದ ಅಧಿವೇಶನದಲ್ಲಿ 30 ಲಕ್ಷ ಬಿಡುಗಡೆ ಮಾಡುತ್ತೇವೆಂದು ಭರವಸೆ ಕೊಟ್ಟಿದ್ದು ನಿಜವಲ್ಲವೇ?

ಆ) ಹಾಗಿದ್ದಲ್ಲಿ, ಈ ಹಣವನ್ನು ಇನ್ನೂ ಬಿಡುಗಡೆ ಮಾಡದಿರಲು ಕಾರಣವೇನು?

ಇ) ಯಾವಾಗ ಈ ಹಣವನ್ನು ಬಿಡುಗಡೆ ಮಾಡಲಾಗುವುದು;

ಈ) ಈ ಕಾಮಗಾರಿಯನ್ನು ಯಾವಾಗ ಮುಕ್ತಾಯ ಗೊಳಿಸಲಾಗುವುದು?

ಡಾ: ಜಿ. ಪರಮೇಶ್ವರ (ಉನ್ನತ ಶಿಕ್ಷಣ ಸಚಿವರು) :—

ಅ) ಹೌದು.

ಆ), ಇ) ಸರ್ಕಾರವು ಪ್ರಥಮ ದರ್ಜೆ ಕಾಲೇಜುಗಳು ಕಟ್ಟಡ ನಿರ್ಮಾಣವನ್ನು ಕೈಗೆತ್ತಿಕೊಳ್ಳಲು ಹುಡ್ಕೋ ಸಂಸ್ಥೆಯಿಂದ ರೂ.1871 ಲಕ್ಷ ನೆರವನ್ನು ಪಡೆಯಲು ಕ್ರಮ ಕೈಗೊಂಡಿದೆ. ಹುಡ್ಕೋ ಸಂಸ್ಥೆಯಿಂದ ಆರ್ಥಿಕ ನೆರವು ದೊರೆತ ತಕ್ಷಣ ಕಾಮಗಾರಿ ಕೆಲಸ ಕೈಗೆತ್ತಿಕೊಳ್ಳಲಾಗುವುದು.